ಆ) ಈ ಬಡಾವಣೆಯಲ್ಲಿ ಉಳಿದಿರುವ ಚರಂಡಿ ವ್ಯವಸ್ಥೆ ಹಾಗೂ ರಸ್ತೆ ನಿರ್ಮಾಣವನ್ನು ಪ್ರಾಧಿಕಾರದಲ್ಲಿ ಹಣದ ಕೊರತೆ ಇರುವುದರಿಂದ ಅದು ಉತ್ತಮಗೊಂಡ ನಂತರ ಮಾಡಲಾಗುವುದು.

ವಿಷಯ :- ಬ್ರಹ್ಮಾವರದಲ್ಲಿ ಉಕ್ಕಿನ ಕಾರ್ಖಾನೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 417 (2437)

ಶ್ರೀ ಕೆ. ಪ್ರತಾಪ್ ಚಂದ್ರ ಶೆಟ್ಟಿ (ಕುಂದಾಪುರ) :- ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಉಡುಪಿ ತಾಲ್ಲೂಕು ಬ್ರಹ್ಮಾವರದಲ್ಲಿ ಉಕ್ಕಿನ ಕಾರ್ಖಾನೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೆ?

ಆ) ಯೋಜನೆಯಿದ್ದಲ್ಲಿ, ಅಗತ್ಯವಿರುವ ಅಂದಾಜು ಭೂಮಿ ಎಷ್ಟು? (ಎಕರೆಗಳಲ್ಲಿ ತಿಳಿಸುವುದು)

ಇ) ಕಬ್ಬು ಬೆಳೆಯುವ ಪ್ರದೇಶವನ್ನು ಉಕ್ಕಿನ ಕಾರ್ಖಾನೆಗೆ ಸ್ವಾಧೀನಪಡಿಸಿಕೊಂಡಲ್ಲಿ ಕಬ್ಬು ಕಾರ್ಖಾನೆ ಮತ್ತು ಬೆಳೆಗಾರರ ಮೇಲೆ ಪರಿಣಾಮ ಬೀರುವುದಿಲ್ಲವೆ?

ಶ್ರೀ ಆರ್. ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು) :-

ಅ) ಉಡುಪಿ ತಾಲ್ಲೂಕ ಬ್ರಹ್ಮಾವರ ಗ್ರಾಮದಲ್ಲಿ ಉಷಾ ಐರನ್ ಅಂಡ್ ಫೆರೋ ಮೆಟಲ್ಸ್ ಕಾರ್ಪೋರೇಷನ್ ಲಿಮಿಟೆಡ್ ರವರ ಉಕ್ಕಿನ ಕಾರ್ಖಾನೆ ಯೋಜನೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಅಧ್ಯಕ್ಷತೆಯಲ್ಲಿ ಉನ್ನತಮಟ್ಟದ ಸಮಿತಿಯು ಶಿಫಾರಸ್ಸು ಮಾಡಿರುತ್ತದೆ.

ಆ) ಸುಮಾರು 1142.3 ಎಕರೆಗಳು ಬೇಕೆಂದು ಅಂದಾಜು ಮಾಡಲಾಗಿದೆ.

ಇ) ಪ್ರಸ್ತುತ ಸ್ವಾಧೀನ ಪಡಿಸಿಕೊಳ್ಳಲು ಹೊರಟಿರುವ ಭೂಮಿಯಲ್ಲಿ ಸುಮಾರು 85 ಎಕರೆ ಪ್ರದೇಶದಲ್ಲಿ ಮಾತ್ರ ಕಬ್ಬು ಬೆಳೆಯಲಾಗುತ್ತಿದೆ ಎಂದು ವರದಿಯಾಗಿದೆ.

ವಿಷಯ :- ಕೈಗಾರಿಕಾ ಮಾಲಿನ್ಯ ನಿಯಂತ್ರಣಕ್ಕೆ ಕೇಂದ್ರದ ಸಹಾಯ

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 418 (2008)

ಶ್ರೀ ಎ. ರಾಮದಾಸ್ (ಕೃಷ್ಣರಾಜ) :- ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಪರಿಸರ ಮತ್ತು ಜೀವಿ ಶಾಸ್ತ್ರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೈಗಾರಿಕಾ ಮಾಲಿನ್ಯ ತಡೆಯಲು ಮಾಲಿನ್ಯ ನಿಯಂತ್ರಣ ಯೋಜನೆಗಳಿಗೆ ಕೇಂದ್ರ ಸರ್ಕಾರ ಶೇಕಡಾ ಎಷ್ಟು ಹಣ ಸಹಾಯಾರ್ಥವಾಗಿ ನೀಡುತ್ತದೆ?

ಆ) ರಾಜ್ಯಕ್ಕೆ ಪ್ರಸ್ತುತ ಯೋಜನೆಯಲ್ಲಿ ಸಹಾಯ ದೊರೆತಿರುವ ಹಣ ಎಷ್ಟು?